ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ವಿಶ್ವ ವಿದ್ಯಾನಿಲಯಗಳಲ್ಲಿ ಉಪಕುಲಪತಿಗಳ ನೇಮಕ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-

25 (109) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಶ್ವ ವಿದ್ಯಾನಿಲಯಗಳಲ್ಲಿ ಉಪಕುಲಪತಿಗಳ ನೇಮಕಾತಿಗಳು ಮಾರಾಟದ ವಸ್ತುಗಳಾಗಿದೆ ಎಂಬ ಆರೋಪವಿದ್ದು, ಈ ಬಗ್ಗೆ ಸುಧಾರಣೆ ತರಲು ಸರ್ಕಾರದ ಮುಂದಿರುವ ಯೋಜನೆಗಳಾವುವು;

(ಆ) ಉಪಕುಲಪತಿಗಳನ್ನು ಜಾತಿ ಮತ್ತು ಧರ್ಮಗಳ ಆಧಾರದಲ್ಲಿ ನೇಮಕ ಮಾಡುವುದಕ್ಕೆ ಅವಕಾಶಗಳಿದೆಯೇ; (ವಿವರ ನೀಡುವುದು)

(ಇ) ಕರ್ನಾಟಕ ರಾಜ್ಯದಲ್ಲಿ ಯಾವ ಯಾವ ಧರ್ಮದ ಉಪಕುಲಪತಿಗಳನ್ನು ನೇಮಿಸಲಾಗಿದೆ ; (ವಿವರ ನೀಡುವುದು)

(ಈ) ವಿಶ್ವ ವಿದ್ಯಾನಿಲಯ ಕಾಯ್ದೆ 2018 ಜಾರಿಗೆ ತರದೇ ಇರಲು ಕಾರಣಗಳೇನು; (ವಿವರ ನೀಡುವುದು)

(ಉ) ವಿಶ್ವ ವಿದ್ಯಾನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೀಠಗಳು ಸರಿಯಾಗಿ ಕಾರ್ಯನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪೀಠಗಳೆಷ್ಟು; ಇದಕ್ಕೆ ಇರುವ ಅನುದಾನ ಎಷ್ಟು? (ವಿಶ್ವ ವಿದ್ಯಾನಿಲಯವಾರು ವಿವರ ನೀಡುವುದು)